# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾಸನ ನಗರದಲ್ಲಿನ ಚನ್ನಪಟ್ಟಣ ಕೆರೆ ಸೇರಿದಂತೆ ಪ್ರಮುಖ ಕೆರೆಗಳ ಅಭಿವೃದ್ಧಿ, ಉದ್ಯಾನವನಗಳ ಅಭಿವೃದ್ಧಿ ಹಾಗೂ ಮೂಲಸೌಲಭ್ಯ ಕಲ್ಪಿಸುವ ಕಾಮಗಾರಿಗಳ ರೂ.144.00 ಕೋಟಿಗಳ ಮೊತ್ತದ ಮಾರ್ಪಡಿಸಿದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

*****

ಓದಲಾಗಿದೆ :-

1. ಸರ್ಕಾರದ ಆದೇಶ ಸಂಖ್ಯೆ: ಜಸಂಇ 13 ಎನ್‌ಹೆಚ್‌ಪಿ 2019, ದಿನಾಂಕ:28.02.2019
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಜಸಂಇ 13 ಎನ್‌ಹೆಚ್‌ಪಿ 2019, ದಿನಾಂಕ:24.07.2019
3. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿ/ತಾಂತ್ರಿಕ-1/ಕೆ.ಆರ್.ಡಿ-29/2020-21, ದಿನಾಂಕ:04.12.2020

ಪ್ರಸ್ತಾವನೆ :-

ಸರ್ಕಾರದ ಆದೇಶ ಸಂಖ್ಯೆ:ಜಸಂಇ 13 ಎನ್‌ಹೆಚ್‌ಪಿ 2019, ದಿನಾಂಕ:28.02.2019 ರಲ್ಲಿ ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರಧಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ರೂ.144.00 ಕೋಟಿಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ತಾತ್ವಿಕ ಅನುಮೋದನೆ ನೀಡಿ, 2019-20ನೇ ಸಾಲಿನಲ್ಲಿ ಕಾಮಗಾರಿಯನ್ನು ರೂ.36.00 ಕೋಟಿಗಳ ಅಂದಾಜು ಮೊತ್ತಕ್ಕೆ ಸೀಮಿತಗೊಳಿಸಿ ಕೈಗೆತ್ತಿಕೊಳ್ಳುವ ಷರತ್ತಿಗೊಳಪಟ್ಟು ಅನುಮೋದನೆ ನೀಡಲಾಗಿತ್ತು.

2. ಮುಂದುವರೆದು, ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಜಸಂಇ 13 ಎನ್‌ಹೆಚ್‌ಪಿ 2019, ದಿನಾಂಕ:24.07.2019 ರಲ್ಲಿ, ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರಧಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ರೂ.144.00 ಕೋಟಿಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಿ 2019-20ನೇ ಸಾಲಿನಲ್ಲಿ ಕಾಮಗಾರಿಯ ವೆಚ್ಚವನ್ನು ರೂ.36.00 ಕೋಟಿಗಳಿಗೆ ಸೀಮಿತಗೊಳಿಸಿ ಹಾಗೂ ಉಳಿಕೆ ಮೊತ್ತವಾದ ರೂ.108.00 ಕೋಟಿಗಳ ಕಾಮಗಾರಿಯನ್ನು 2020-21ನೇ ಸಾಲಿನಲ್ಲಿ ಕಾವೇರಿ ನೀರಾವರಿ ನಿಗಮಕ್ಕೆ ಹಂಚಿಕೆಯಾಗುವ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿತ್ತು.

3. ನಂತರದಲ್ಲಿ, ಹಾಸನ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರು ಸನ್ಮಾನ್ಯ ಮುಖ್ಯಮಂತ್ರಿಯವರಿಗೆ ಮನವಿಯನ್ನು ಸಲ್ಲಿಸಿ, ಸದರಿ ಕಾಮಗಾರಿ ಅಡಿಯಲ್ಲಿ ಹಾಸನ ನಗರಕ್ಕೆ ಸರಿಹೊಂದುವಂತೆ ಚನ್ನಪಟ್ಟಣ ಕೆರೆ ಮತ್ತು ಉದ್ಯಾನವನ ಅಭಿವೃದ್ಧಿಯನ್ನು ಕೈಗೊಂಡು ಉಳಿಕೆ ಮೊತ್ತದಲ್ಲಿ ಹಾಸನ ನಗರದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಇತರೆ ಕೆರೆಗಳು ಹಾಗೂ ಉದ್ಯಾನವನಗಳನ್ನೊಳಗೊಂಡಂತೆ ಸುತ್ತಮುತ್ತಲ ಪ್ರದೇಶಗಳ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದು ಅವಶ್ಯಕವಾಗಿರುವುದರಿಂದ, ಸರ್ಕಾರದಿಂದ ಅನುಮೋದನೆಗೊಂಡಿರುವ ರೂ.144.00 ಕೋಟಿಗಳ ವಿವರವಾದ ಯೋಜನಾ ವರದಿಯನ್ನು ಪರಿಷ್ಕರಿಸುವಂತೆ ಕೋರಿರುತ್ತಾರೆ.

4. ಈ ಹಿನ್ನೆಲೆಯಲ್ಲಿ, ಹಾಸನ ನಗರದಲ್ಲಿನ ಚನ್ನಪಟ್ಟಣ ಕೆರೆ ಸೇರಿದಂತೆ ನಗರದ ಪ್ರಮುಖ ಕೆರೆಗಳ (ಚನ್ನಪಟ್ಟಣ ಕೆರೆ, ಗವೇನಹಳ್ಳಿ ಕೆರೆ, ಬೂವನಹಳ್ಳಿ ಕೆರೆ, ಸತ್ಯಮಂಗಲ ಕೆರೆ, ಗುಡ್ಡೇನಹಳ್ಳಿ ಕೆರೆ ಮತ್ತು ಹುಣಸೀಕೆರೆ), ಉದ್ಯಾನವನಗಳ (ಮಹಾರಾಜ ಪಾರ್ಕ, ಗಂಧದ ಕೋಠಿ, ಎಸ್.ಬಿ.ಎಂ. ಕಾಲೋನಿ ಗಣಪತಿ ದೇವಸ್ಥಾನದ ಪಾರ್ಕ್,

FNHP 20 dt 13/5/21

15

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯ ಸರಪಳಿ 9.85 ಕಿ.ಮೀ. ನಿಂದ ನೀರನ್ನು ಎತ್ತಿ ತಿಪಟೂರು ತಾಲ್ಲೂಕಿನ ಕಸಬಾ ಹೋಬಳಿಯ ಮಡೆನೂರು ಮತ್ತು ಇತರೆ ಆಯ್ದ 9 ಕೆರೆಗಳಿಗೆ ಕುಡಿಯುವ ನೀರೊದಗಿಸುವ ಯೋಜನೆಯ ರೂ.36.50 ಕೋಟಿ ಮೊತ್ತದ ಅಂದಾಜಿನ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

*****

**ಓದಲಾಗಿದೆ :-**

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-5/ನಾಗವಲ್ಲಿ/01/2019-20 ದಿನಾಂಕ:02.12.2020

**ಪ್ರಸ್ತಾವನೆ :-**

ಮೇಲೆ ಓದಲಾದ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರು, ತಿಪಟೂರು ತಾಲ್ಲೂಕಿನ ಹೊನ್ನವಳ್ಳಿ ಮತ್ತು ಕಸಬಾ ಹೋಬಳಿ, ಅರಸೀಕೆರೆ, ಕಡೂರು ಮತ್ತು ಹೊಸದುರ್ಗ ತಾಲ್ಲೂಕಿನ ಆಯ್ದ ಗ್ರಾಮಗಳು ಮಳೆ ವೈಫಲ್ಯದಿಂದ ಹಾಗೂ ಅಂತರ್ಜಲ ಕುಸಿತದಿಂದ ಕುಡಿಯುವ ನೀರಿನ ಶಾಶ್ವತ ಆಸರೆ ಇಲ್ಲದೆ ಬರ ಪೀಡಿತವಾಗಿರುವುದನ್ನು ಗಮನಿಸಿ ಸರ್ಕಾರದ ಆದೇಶ ಸಂಖ್ಯೆ:ಜಸಂಇ 28 ಎನ್.ಹೆಚ್.ಪಿ 2008, ದಿನಾಂಕ:11.02.2009 ರಂತೆ ಹೇಮಾವತಿ ಯೋಜನೆಯ ತುಮಕೂರು ಶಾಖಾ ಕಾಲುವೆ ಸರಪಳಿ 9.90 ಕಿ.ಮೀ. ನ ನಾಲೆಯಿಂದ 0.201 ಟಿ.ಎಂ.ಸಿ ನೀರನ್ನು ಬಳಸಿಕೊಂಡು ಈ ತಾಲ್ಲೂಕುಗಳ ಆಯ್ದ 24 ಕೆರೆಗಳಿಗೆ ಕುಡಿಯುವ ನೀರಿನ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು; ಅನುಮೋದಿತ ಯೋಜನೆಯಂತೆ ತಿಪಟೂರು ತಾಲ್ಲೂಕಿನ 17 ಕೆರೆಗಳಿಗೆ ಅರಸೀಕೆರೆ ತಾಲ್ಲೂಕಿನ 5 ಕೆರೆಗಳಿಗೆ, ಕಡೂರು ತಾಲ್ಲೂಕಿನ 1 ಕೆರೆ ಮತ್ತು ಹೊಸದುರ್ಗ ತಾಲ್ಲೂಕಿನ 1 ಕೆರೆಗೆ ನೀರು ಪೂರೈಸಲು ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಯೋಜನೆಯು ಚಾಲನೆಯಲ್ಲಿದೆ; ತಿಪಟೂರು ತಾಲ್ಲೂಕಿನ ಮಾನ್ಯ ಶಾಸಕರು ಪ್ರಸ್ತುತ ಚಾಲ್ತಿಯಲ್ಲಿರುವ ಹೊನ್ನವಳ್ಳಿ ಏತ ನೀರಾವರಿ ಯೋಜನೆಯಲ್ಲಿ ಕೆಲವು ಮಾರ್ಪಾಡುಗಳೊಂದಿಗೆ, ತಿಪಟೂರು ತಾಲ್ಲೂಕಿನ ಕಸಬಾ ಹೋಬಳಿಯ ಮಡೆನೂರು ಮತ್ತು ಇತರೆ ಆಯ್ದ 9 ಕೆರೆಗಳಿಗೆ ಕುಡಿಯುವ ನೀರೊದಗಿಸುವ ಯೋಜನೆಗೆ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ ಎಂದು ವರದಿ ಮಾಡಿರುತ್ತಾರೆ.

2. ಮುಂದುವರೆದು, ಹೊನ್ನವಳ್ಳಿ ಕುಡಿಯುವ ನೀರಿನ ಯೋಜನೆಯ ತಿಪಟೂರು ತಾಲ್ಲೂಕಿನ ಹೊನ್ನವಳ್ಳಿ ಹೋಬಳಿ ಮತ್ತು ಕಸಬಾ ಹೋಬಳಿಯ ಆಯ್ದ 21 ಕೆರೆಗಳಿಗೆ ಹಾಗೂ ಹೆಚ್ಚುವರಿಯಾಗಿ ಸಾರ್ಥವಳ್ಳಿ ಕೆರೆಗೆ ಶೇಕಡ 60 ರಷ್ಟು (ಪ್ರಸ್ತುತ ಹಂಚಿಕೆಯಾಗಿರುವ ನೀರಿನ ಪ್ರಮಾಣ 93.20 ಎಂ.ಸಿ.ಎಫ್.ಟಿ. ಒಳಗೊಂಡಂತೆ) ಹೆಚ್ಚುವರಿಯಾಗಿ 220 ಎಂ.ಸಿ.ಎಫ್.ಟಿ. ನೀರನ್ನು ಸಣ್ಣ ನೀರಾವರಿ ಕೆರೆಗಳನ್ನು ತುಂಬಿಸುವ ಸಲುವಾಗಿ ಸರ್ಕಾರದ ಪತ್ರ ಸಂಖ್ಯೆ:ಜಸಂಇ 49 ಎನ್ ಹೆಚ್ ಪಿ 2019, ದಿನಾಂಕ:19.11.2019 ರಲ್ಲಿ ಹಂಚಿಕೆ ಮಾಡಲಾಗಿದ್ದು, ಅದರಂತೆ ಸದರಿ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ವರದಿ ಮಾಡಿರುತ್ತಾರೆ.

3. ಪ್ರಸ್ತಾಪಿತ ಯೋಜನೆಯನ್ನು ತಿಪಟೂರು ತಾಲ್ಲೂಕಿನ ಹೊಗವನಘಟ್ಟ ಗ್ರಾಮದ ಬಳಿ ಇರುವ ತುಮಕೂರು ಶಾಖಾ ನಾಲೆಯ ಸರಪಳಿ 9.85 ಕಿ.ಮೀ.ನಿಂದ ನೀರನ್ನು ಎತ್ತಿ ಮಡೆನೂರಿನಲ್ಲಿ ಈಗಾಗಲೇ ಇರುವ ಡೆಲಿವರಿ ಚೇಂಬರ್ ನ ಸರಪಳಿ 8.625 ಕಿ.ಮೀ. ವರೆಗೆ ಹೊಸದಾಗಿ ರೈಸಿಂಗ್ ಮೈನ್ 700 ಎಂ.ಎಂ. ವ್ಯಾಸದ 6 ಎಂ.ಎಂ. ದಪ್ಪದ ಎಂ.ಎಸ್.ಪೈಪ್ ಅನ್ನು ಅಳವಡಿಸಿ, ನೀರನ್ನು 90 ದಿನಗಳ ಕಾಲ 24 ಗಂಟೆಗಳಂತೆ 20.50 ಕ್ಯೂಸೆಕ್ಸ್ ನಂತೆ ಪೂರೈಸಲು ಯೋಜಿಸಿದೆ. ಸದರಿ ವ್ಯವಸ್ಥೆಯ ನೀರು ಎತ್ತುವ ಎತ್ತರ 75.00 ಮೀ. ಆಗಿದೆ.

4. ಸದರಿ ಯೋಜನೆಯ ಅಂದಾಜು ಪಟ್ಟಿಯನ್ನು ಜಲಸಂಪನ್ಮೂಲ ಇಲಾಖೆಯ 2018-19ನೇ ಸಾಲಿನ ದರಪಟ್ಟಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ 2018-19ನೇ ಸಾಲಿನ ದರಪಟ್ಟಿ, ಕರ್ನಾಟಕ ಒಳ ಚರಂಡಿ ಮತ್ತು ನೀರು ಸರಬರಾಜು ಇಲಾಖೆಯ 2018-19ನೇ ಸಾಲಿನ ದರಪಟ್ಟಿ,

ಹೊಯ್ಸಳ ನಗರ ಪಾರ್ಕ್, ಫ್ರೀಡಂ ಪಾರ್ಕ್, ಸಿಲ್ವರ್ ಜ್ಯೂಬಿಲಿ ಪಾರ್ಕ್, ಹೌಸಿಂಗ್ ಬೋರ್ಡ್ ಪಾರ್ಕ್, ವಿಜಯನಗರ ಪಾರ್ಕ್), ಹಾಗೂ ಹಾಸನ ನಗರದ ಬೈಪಾಸ್ ರಸ್ತೆ ಹತ್ತಿರವಿರುವ ರುದ್ರಭೂಮಿಯ ಅಭಿವೃದ್ಧಿ ಮತ್ತು ಮೂಲಸೌಲಭ್ಯ ಕಲ್ಪಿಸುವ ಕಾಮಗಾರಿಗಳನ್ನು ಅಳವಡಿಸಿಕೊಂಡು ಅಭಿವೃದ್ಧಿಪಡಿಸಲು ರೂ.144.00 ಕೋಟಿ ಮೊತ್ತದ ಮಾರ್ಪಡಿಸಿದ ಯೋಜನಾ ವರದಿಗೆ ದಿನಾಂಕ:07.01.2020 ರಂದು ನಡೆದ ಕಾವೇರಿ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 6ನೇ ಸಭೆಯಲ್ಲಿ ತೀರುವಳಿ ನೀಡಲಾಗಿದೆ ಹಾಗೂ ದಿನಾಂಕ:05.10.2020 ರಂದು ನಡೆದ ಕಾವೇರಿ ನೀರಾವರಿ ನಿಗಮ ಮಂಡಳಿಯ 72ನೇ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು ಮೇಲೆ ಓದಲಾದ (3)ರ ಪತ್ರದಲ್ಲಿ ವರದಿ ಮಾಡಿರುತ್ತಾರೆ.

6. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಜಸಂಇ 13 ಎನ್‌ಹೆಚ್‌ಪಿ 2019,**
**ಬೆಂಗಳೂರು, ದಿನಾಂಕ:02.06.2021**

ಹಾಸನ ನಗರದಲ್ಲಿನ ಚನ್ನಪಟ್ಟಣ ಕೆರೆ ಸೇರಿದಂತೆ ಪ್ರಮುಖ ಕೆರೆಗಳ ಅಭಿವೃದ್ಧಿ, ಉದ್ಯಾನವನಗಳ ಅಭಿವೃದ್ಧಿ ಹಾಗೂ ಮೂಲಸೌಲಭ್ಯ ಕಲ್ಪಿಸುವ ಕಾಮಗಾರಿಗಳ ರೂ.144.00 ಕೋಟಿಗಳ ಮೊತ್ತದ ಮಾರ್ಪಡಿಸಿದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 26 ಆಕೋ-1/2021 ದಿನಾಂಕ:29.03.2021 ರನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

02/06/2021

**(ಮನೋಹರ ವೈ. ರೊಟ್ಟೆ)**
**ಸರ್ಕಾರದ ಅಧೀನ ಕಾರ್ಯದರ್ಶಿ (ತಾಂ-2)**
**ಜಲ ಸಂಪನ್ಮೂಲ ಇಲಾಖೆ.**

**ಇವರಿಗೆ :**

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕ ಪರಿಶೋಧನ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
6. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:159/2021 ದಿನಾಂಕ:27.05.2021)
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+++++